ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ಕೇಂದ್ರ

ಪತ್ರಿಕೆಯ ಹೆಸರು : NAME OF THE NEWS PAPER : ವಿಶ್ವವಾಣಿ　　ದಿನಾಂಕ : DATE : 28/05/2019

# ಪ್ರಮಾಣ ವಚನ ಸ್ವೀಕಾರ ಸಮಾರಂಭ ಬಿಮ್‌ಸ್ಟೆಕ್ ದೇಶಗಳಿಗೆ ಆಹ್ವಾನ

**ದೆಹಲಿ:** ಮೇ 30ರಂದು ದೆಹಲಿಯಲ್ಲಿ ನಡೆಯಲಿರುವ ಪ್ರಧಾನಿ ನರೇಂದ್ರ ಮೋದಿ ಅವರ ಪ್ರಮಾಣ ವಚನ ಸ್ವೀಕಾರ ಸಮಾರಂಭಕ್ಕೆ ಬಿಮ್ ಸ್ಟೆಕ್ ಒಕ್ಕೂಟದ ಸದಸ್ಯ ದೇಶಗಳ ನಾಯಕರು ಹಾಗೂ ಸರಕಾರಿ ಮುಖ್ಯಸ್ಥರನ್ನು ಆಹ್ವಾನಿಸಲಾಗಿದೆ.

ಪ್ರಮಾಣ ವಚನ ಸ್ವೀಕಾರ ಸಮಾರಂಭಕ್ಕೆ ಬಿಮ್ ಸ್ಟೆಕ್ ಸದಸ್ಯ ದೇಶಗಳ ನಾಯಕರನ್ನು ಭಾರತ ಸರಕಾರ ಆಹ್ವಾನಿಸಿದೆ. ನೆರೆಹೊರೆ ಮೊದಲು ಎಂಬ ಭಾರತ ಸರಕಾರದ ನೀತಿಯ ಭಾಗವಾಗಿ ಈ ಆಹ್ವಾನ ನೀಡಲಾಗಿದೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವಾಲಯದ ವಕ್ತಾರ ತಿಳಿಸಿದ್ದಾರೆ.

ಶಾಂಘೈ ಸಹಕಾರ ಸಂಘಟನೆಯ ಪ್ರಸಕ್ತ ಅಧ್ಯಕ್ಷ ಕಿರ್ಗಿಜ್ ಗಣರಾಜ್ಯದ ಅಧ್ಯಕ್ಷ ಸೂರೋನ್ಬೇ ಜೆನೆಕೋವ್, ಮಾರಿಷಿಯಸ್ ಪ್ರಧಾನಿ ಪ್ರವಿಂದ್ ಜಗನ್ನಾಥ್ ಅವರನ್ನೂ ಸಮಾರಂಭಕ್ಕೆ ಆಹ್ವಾನಿಸಲಾಗಿದೆ.

ಪ್ರಮಾಣ ವಚನ ಸಮಾರಂಭದಲ್ಲಿ ಪಾಲ್ಗೊಳ್ಳಲಿರುವ ವಿದೇಶಿ ಗಣ್ಯರ ಮತ್ತಷ್ಟು ಮಾಹಿತಿಯನ್ನು ಮಾಧ್ಯಮಗಳಿಗೆ ನಿರಂತರವಾಗಿ ಒದಗಿಸಲಾಗುವುದು ಎಂದು ವಕ್ತಾರರು ಹೇಳಿದ್ದಾರೆ.

2014ರ ಮೇ 26 ರಂದು ನಡೆದ ನರೇಂದ್ರ ಮೋದಿ ಅವರು ಪ್ರಧಾನಿಯಾಗಿ ಮೊದಲು ಪ್ರಮಾಣ ವಚನ ಸ್ವೀಕಾರ ಸಮಾರಂಭಕ್ಕೆ ಸಾರ್ಕ್ ದೇಶಗಳ ಸರಕಾರಗಳ ಮುಖ್ಯಸ್ಥರನ್ನು ಆಹ್ವಾನಿಸಲಾಗಿತ್ತು.

2014ರ ಪ್ರಮಾಣ ವಚನ ಸಮಾರಂಭದಲ್ಲಿ ಪಾಕಿಸ್ತಾನದ ಅಂದಿನ ಪ್ರಧಾನಿ ನವಾಜ್ ಷರೀಫ್ ಭಾಗವಹಿಸಿ ಆಕರ್ಷಣೆಯ ಕೇಂದ್ರ ಬಿಂದುವಾಗಿದ್ದರು. ಬಿಮ್ ಸ್ಟೆಕ್ ರಾಷ್ಟ್ರಗಳ ಮುಖ್ಯಸ್ಥರನ್ನು ಸಮಾರಂಭಕ್ಕೆ ಆಹ್ವಾನಿಸುವ ನಿರ್ಧಾರ ಪ್ರಕಟಿಸುವ ಮೂಲಕ ಪಾಕಿಸ್ತಾನದ ಹೊಸ ಪ್ರಧಾನಿ ಇಮ್ರಾನ್ ಖಾನ್ ಅವರನ್ನು ಸಮಾರಂಭಕ್ಕೆ ಆಹ್ವಾನಿಸಲಿದ್ದಾರೆಯೇ ಎಂಬ ಊಹಾಪೋಹಗಳಿಗೆ ತೆರೆ ಎಳೆದಿದ್ದಾರೆ.

ಬಾಂಗ್ಲಾದೇಶ, ಭಾರತ, ಮ್ಯಾನ್ಮಾರ್, ಶ್ರೀಲಂಕಾ, ಥೈಲ್ಯಾಂಡ್, ನೇಪಾಳ ಮತ್ತು ಭೂತಾನ್ ಬಿಮ್ ಸ್ಟೆಕ್ ರಾಷ್ಟ್ರಗಳಾಗಿವೆ. ದಕ್ಷಿಣ ಹಾಗೂ ಆಗ್ನೇಯ ಏಷ್ಯಾ ರಾಷ್ಟ್ರಗಳ ನಡುವಣ ಸೇತುವೆಯಾಗಿ ಸೇವೆ ಸಲ್ಲಿಸುವ ಉದ್ದೇಶದೊಂದಿಗೆ 1997ರ ಬ್ಯಾಂಕಾಂಕ್ ಒಪ್ಪಂದದಂತೆ ಬಿಮ್ ಸ್ಟೆಕ್ ರಾಷ್ಟ್ರಗಳ ಒಕ್ಕೂಟವನ್ನು ರಚಿಸಲಾಗಿದೆ.

ಮೇ 30ರಂದು ರಾಷ್ಟ್ರಪತಿ ಭವನದಲ್ಲಿ ಸಂಜೆ 7 ಗಂಟೆ ನಡೆಯುವ ಕಾರ್ಯಕ್ರಮದಲ್ಲಿ ಪ್ರಧಾನಿ ನರೇಂದ್ರ ಮೋದಿ ಹಾಗೂ ನೂತನ ಸಂಪುಟದ ಸಚಿವರಿಗೆ ರಾಷ್ಟ್ರಪತಿ ರಾಮನಾಥ್ ಕೋವಿಂದ್ ಅಧಿಕಾರದ ಗೌಪ್ಯತೆ ಬೋಧಿಸಲಿದ್ದಾರೆ.